ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ

ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/04/ಐಡಿಪಿ/2017-18

ಸಂಯೋಜನಾಧಿಕಾರಿಯವರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01,
ದಿನಾಂಕ:17-11-2017,

## ಸುತ್ತೋಲೆ

ವಿಷಯ:ದಿನಾಂಕ: 19-11-2017 ರಿಂದ 25-11-2017ರವರೆಗೆ ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ಆಚರಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 4 ರಾರಾಆ 2017ದಿನಾಂಕ:13-11-2017

2) ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 4 ರಾಐಸ 2017ದಿನಾಂಕ:13-11-2017

*****

ಮೇಲಿನ ವಿಷಯ ಹಾಗೂ ಉಲ್ಲೇಖಿತ ಸರ್ಕಾರದ ಆದೇಶಗಳನುಸಾರ, ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಬಲಪಡಿಸಲು, ಹಿಂಸಾಚಾರ ಮತ್ತು ಕೋಮು ದ್ವೇಷವನ್ನು ತಡೆಗಟ್ಟಲು ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ದಿನಾಂಕ:19-11-2017 ರಿಂದ 25-11-2017ರವರೆಗೆ ಆಚರಿಸಲು ಸೂಚಿಸಲಾಗಿದೆ. ದಿನಾಂಕ:19.11.2017 ಭಾನುವಾರ ಸಾರ್ವತ್ರಿಕ ರಜಾ ದಿನವಾಗಿರುವುದರಿಂದ ಅದರ ಹಿಂದಿನ ದಿವಸ ದಿನಾಂಕ:18.11.2017 ರಂದು ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನವನ್ನು ಬೋಧಿಸುವ ಕಾರ್ಯಕ್ರಮದೊಂದಿಗೆ ಪ್ರಾರಂಭಿಸಲು ಉಲ್ಲೇಖ(2) ರಂತೆ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಅಡಿಯಲ್ಲಿರುವ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಈ ಸಪ್ತಾಹವನ್ನು ಸಾರ್ವಜನಿಕರು ಮತ್ತು ಸ್ವಯಂ ಸೇವಾ ಸಂಸ್ಥೆಗಳ ಸಹಭಾಗಿತ್ವದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಮತ್ತೊಮ್ಮೆ ಸೂಚಿಸಲಾಗಿದೆ. ರಾಷ್ಟ್ರೀಯ ಐಕ್ಯತಾ ಪ್ರತಿಜ್ಞೆಯ ಪ್ರತಿಯನ್ನು ಹಾಗೂ ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳ ವಿವರಗಳನ್ನು ಇದರೊಂದಿಗೆ ಲಗತ್ತಿಸಿದೆ.

ಕಾರ್ಯಕ್ರಮವನ್ನು ನಡೆಸಿದ ಬಗ್ಗೆ ಒಂದು ವರದಿಯನ್ನು ರಾಷ್ಟ್ರೀಯ ಸೇವಾ ಯೋಜನೆಯ ಕಛೇರಿಗೆ ಹಾಗೂ ಪ್ರತಿಯನ್ನು ಮಿಂಚಂಚೆ nssdte@gmail.com ಗೆ ಕಳುಹಿಸಬೇಕೆಂದು ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ನಿರ್ದೇಶಕರು,

ಪ್ರತಿ:-

1. ರಾಜ್ಯದ ಎಲ್ಲಾ ಸರ್ಕಾರಿ /ಅನುದಾನಿತ/ಖಾಸಗಿ, ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ -ಸೂಕ್ತ ಕ್ರಮಕ್ಕಾಗಿ
2. ಸರ್ಕಾರದ ಅಧೀನ ಕಾರ್ಯದರ್ಶಿಗಳು ಸಿಆಸುಇ
3. ರಾಜ್ಯ ಸಂಪರ್ಕಾಧಿಕಾರಿಗಳು ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಯುವಜನ ಸೇವಾಇಲಾಖೆ ಬೆಂಗಳೂರು-01
4. ಇ-ಆಡಳಿತ ವಿಭಾಗಕ್ಕೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು
5. ಕಛೇರಿ ಪ್ರತಿ

ದಿನಾಂಕ: 19-11-2017 ರಿಂದ 25-11-2017ರ ವರೆಗೆ ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳ ವಿವರ:

| | | |
|---|---|---|
| ದಿನಾಂಕ: 19-11-2017 | ಭಾನುವಾರ | "ರಾಷ್ಟ್ರೀಯ ಐಕ್ಯತಾ ದಿನ" ಅಹಿಂಸೆ, ಕೋಮು ಸೌಹಾರ್ದತೆ, ಜಾತ್ಯಾತೀತತೆ, ಈ ವಿಷಯಗಳ ಬಗ್ಗೆ ಕಥೆಯನ್ನು ಹಾಗೂ ವಿಚಾರ ಸಂಕಿರಣಗಳನ್ನು ಏರ್ಪಡಿಸುವುದು. |
| ದಿನಾಂಕ: 20-11-2017 | ಸೋಮವಾರ | "ಅಲ್ಪ ಸಂಖ್ಯಾತರ ಕಲ್ಯಾಣ ದಿನ" ಅಲ್ಪ ಸಂಖ್ಯಾತರ ಅಭಿವೃದ್ಧಿಗಾಗಿ ರೂಪಿಸಿರುವ 15 ಅಂಶಗಳ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಪ್ರಯತ್ನಿಸುವುದು ಮತ್ತು ಕೋಮು ಗಲಭೆ ಪೀಡಿತ ಪ್ರದೇಶಗಳಲ್ಲಿ ಭ್ರಾತೃತ್ವ ಭಾವನೆ ಬೆಳೆಸುವಂತೆ ಮೆರವಣಿಗೆಗಳನ್ನು ಏರ್ಪಡಿಸುವುದು. |
| ದಿನಾಂಕ: 21-11-2017 | ಮಂಗಳವಾರ | "ಭಾಷಾ ಸೌಹಾರ್ದತಾ ದಿನ" ಭಾರತದ ಇತರ ಪ್ರದೇಶಗಳ ಭಾಷಾ ಪರಂಪರೆಯನ್ನು ಮತ್ತೊಂದು ಪ್ರದೇಶದ ಜನತೆಗೆ ತಿಳಿ ಹೇಳುವ ಸಲುವಾಗಿ ವಿಶೇಷ ಸಾಹಿತ್ಯಕ ಸಮಾರಂಭ ಮತ್ತು ಕವಿ ಸಮ್ಮೇಳನಗಳನ್ನು ಏರ್ಪಡಿಸುವುದು. |
| ದಿನಾಂಕ: 22-11-2017 | ಬುಧವಾರ | "ದುರ್ಬಲ ವರ್ಗಗಳ ದಿನ" ಭೂಹೀನ ಕೃಷಿ ಕಾರ್ಮಿಕರಿಗೆ ಹೆಚ್ಚುವರಿ ಜಮೀನು ಮಂಜೂರಾತಿ ಕಾರ್ಯಕ್ರಮ ಸೇರಿದಂತೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ದುರ್ಬಲ ವರ್ಗಗಳ ಅಭಿವೃದ್ಧಿಗೆ ಸರ್ಕಾರ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳನ್ನು ಎತ್ತಿ ತೋರಿಸುವಂತೆ ಸಭೆ ಮತ್ತು ಮೆರವಣಿಗೆಗಳನ್ನು ಏರ್ಪಡಿಸುವುದು. |
| ದಿನಾಂಕ: 23-11-2017 | ಗುರುವಾರ | "ಸಾಂಸ್ಕೃತಿಕ ಏಕತಾ ದಿನ" ಭಾರತೀಯ ಪರಂಪರೆಯಾದ ವಿವಿಧತೆಯಲ್ಲಿ ಏಕತೆಯನ್ನು ಪ್ರತಿಬಿಂಬಿಸುವಂತಹ ಸಂಸ್ಕೃತಿ ಮತ್ತು ಐಕ್ಯತೆಯನ್ನು ಸಂರಕ್ಷಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು. |
| ದಿನಾಂಕ: 24-11-2017 | ಶುಕ್ರವಾರ | "ಮಹಿಳಾ ದಿನ" ಭಾರತೀಯ ಸಮಾಜದಲ್ಲಿ ಮಹಿಳೆಯರ ಪ್ರಾಮುಖ್ಯತೆ ರಾಷ್ಟ್ರ ನಿರ್ಮಾಣ ಹಾಗೂ ಪ್ರಗತಿಯಲ್ಲಿ ಅವರ ಪಾತ್ರವನ್ನು ಎತ್ತಿ ತೋರಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು. |
| ದಿನಾಂಕ: 25-11-2017 | ಶನಿವಾರ | "ಪರಿಸರ ರಕ್ಷಣಾ ದಿನ" ಜನ ಸಾಮಾನ್ಯರಿಗೆ ಪರಿಸರದ ಬಗ್ಗೆ ಹಾಗೂ ಅದನ್ನು ಉಳಿಸಿ ಬೆಳೆಸಲು ತಿಳುವಳಿಕೆ ಹೇಳುವ ಸಭೆ ಸಮಾರಂಭಗಳನ್ನು ಏರ್ಪಡಿಸುವುದು. |

# ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ

"ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಸಂರಕ್ಷಿಸಲು ಮತ್ತು ಬಲಪಡಿಸಲು ಅರ್ಪಣಾ ಮನೋಭಾವದಿಂದ ಕೆಲಸ ಮಾಡುತ್ತೇನೆಂದು ನಾನು ಶ್ರದ್ಧಾಪೂರ್ವಕವಾಗಿ ಪ್ರಮಾಣ ಮಾಡುತ್ತೇನೆ."

"ಅಲ್ಲದೆ ನಾನು ಎಂದಿಗೂ ಹಿಂಸಾಚಾರದಲ್ಲಿ ತೊಡಗುವುದಿಲ್ಲವೆಂದು ಮತ್ತು ಮತ, ಭಾಷೆ, ಪ್ರದೇಶ ಅಥವಾ ಇತರ ರಾಜಕೀಯ ಅಥವಾ ಆರ್ಥಿಕ ಕುಂದು ಕೊರತೆಗಳ ಬಗೆಗಿನ ಭಿನ್ನಾಭಿಪ್ರಾಯಗಳನ್ನು ಮತ್ತು ವಿವಾದಗಳನ್ನು ಶಾಂತಿಯುತವಾಗಿ ಹಾಗೂ ಸಂವಿಧಾನಾತ್ಮಕ ರೀತಿಯಲ್ಲಿ ಬಗೆಹರಿಸಿಕೊಳ್ಳುವ ದಿಸೆಯಲ್ಲಿ ನನ್ನ ಪ್ರಯತ್ನವನ್ನು ಮುಂದುವರೆಸುತ್ತೇನೆಂದೂ ಪ್ರಮಾಣ ಮಾಡುತ್ತೇನೆ."